ಯಾರು ಪುನರುತ್ಥಾನ ದಿನದ ಕಷ್ಟಗಳಿಂದ ಅಲ್ಲಾಹು ತನ್ನನ್ನು ರಕ್ಷಿಸಬೇಕೆಂದು ಬಯಸುತ್ತಾನೋ, ಅವನು ಕಷ್ಟದಲ್ಲಿರುವವನಿಗೆ ಸಹಾಯ ಮಾಡಲಿ ಅಥವಾ ಅವನ ಸಾಲವನ್ನು ಮನ್ನಾ ಮಾಡಲಿ

ಅಬೂ ಕತಾದ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು ಒಂದು ಸಲ ತಮ್ಮ ಸಾಲಗಾರನನ್ನು ಹುಡುಕುತ್ತಾ ಹೋದರು. ಆದರೆ ಆತ ತಪ್ಪಿಸಿಕೊಳ್ಳುತ್ತಿದ್ದ. ನಂತರ ಆತ ಇವರ ಕಣ್ಣಿಗೆ ಬಿದ್ದ. ಆತ ಹೇಳಿದ: "ನಾನು ಕಷ್ಟದಲ್ಲಿದ್ದೇನೆ." ಅಬೂ ಕತಾದ ಕೇಳಿದರು: "ಅಲ್ಲಾಹನಾಣೆಗೂ?" ಆತ ಉತ್ತರಿಸಿದ: "ಅಲ್ಲಾಹನಾಣೆಗೂ." ಅಬೂ ಕತಾದ ಹೇಳಿದರು: "ಅಲ್ಲಾಹನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೀಗೆ ಹೇಳುವುದನ್ನು ನಾನು ಕೇಳಿದ್ದೇನೆ: "ಯಾರು ಪುನರುತ್ಥಾನ ದಿನದ ಕಷ್ಟಗಳಿಂದ ಅಲ್ಲಾಹು ತನ್ನನ್ನು ರಕ್ಷಿಸಬೇಕೆಂದು ಬಯಸುತ್ತಾನೋ, ಅವನು ಕಷ್ಟದಲ್ಲಿರುವವನಿಗೆ ಸಹಾಯ ಮಾಡಲಿ ಅಥವಾ ಅವನ ಸಾಲವನ್ನು ಮನ್ನಾ ಮಾಡಲಿ." [صحيح] [رواه مسلم]

ಅಬೂ ಕತಾದ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ತಮ್ಮ ಸಾಲಗಾರನನ್ನು ಹುಡುಕುತ್ತಿದ್ದರು. ಆದರೆ ಆತ ಅವರಿಗೆ ಸಿಗದಂತೆ ಅಡಗಿಕೊಳ್ಳುತ್ತಿದ್ದ. ಒಮ್ಮೆ ಅವರು ಆತನನ್ನು ಕಂಡುಹಿಡಿದರು. ಆಗ ಸಾಲಗಾರ ಹೇಳಿದ: ನಾನು ಕಷ್ಟದಲ್ಲಿದ್ದೇನೆ. ನಿಮ್ಮ ಸಾಲವನ್ನು ಮರುಪಾವತಿಸಲು ನನ್ನ ಬಳಿ ಹಣವಿಲ್ಲ. ಆಗ ಅಬೂ ಕತಾದ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ಅವನ ಬಳಿ ನಿಜವಾಗಿಯೂ ಹಣವಿಲ್ಲ ಎಂದು ಅಲ್ಲಾಹನ ಹೆಸರಿನಲ್ಲಿ ಪ್ರಮಾಣ ಮಾಡಿಸಿದರು. ಆಗ ಅವನು ತಾನು ಹೇಳುತ್ತಿರುವುದು ಸತ್ಯವೆಂದು ಅಲ್ಲಾಹನ ಮೇಲೆ ಪ್ರಮಾಣ ಮಾಡಿದನು. ಆಗ ಅಬೂ ಕತಾದ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ಹೇಳಿದರು: ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೀಗೆ ಹೇಳುವುದನ್ನು ನಾನು ಕೇಳಿದ್ದೇನೆ: ಯಾರು ಪುನರುತ್ಥಾನ ದಿನದ ಸಂಕಟಗಳು, ತೊಂದರೆಗಳು ಮತ್ತು ಭಯಾನಕತೆಗಳಿಂದ ಅಲ್ಲಾಹು ತನ್ನನ್ನು ರಕ್ಷಿಸಬೇಕೆಂದು ಬಯಸುತ್ತಾನೋ, ಅವನು ಕಷ್ಟದಲ್ಲಿರುವವನಿಗೆ ಸಹಾಯ ಮಾಡಲಿ. ಅಂದರೆ ಸಾಲ ಮರುಪಾವತಿಯ ಅವಧಿಯನ್ನು ವಿಸ್ತರಿಸಲಿ ಅಥವಾ ವಿಳಂಬ ಮಾಡಲಿ. ಅಥವಾ ಸಾಲದ ಒಂದಂಶವನ್ನು ಅಥವಾ ಸಂಪೂರ್ಣ ಸಾಲವನ್ನು ಮನ್ನಾ ಮಾಡಲಿ.

http://www.sunnah.global/hadeeth/kn/show/4195